# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 778 (869) |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಖಾಸಗಿ ಕಾಲೇಜುಗಳಿಂದ ನಿಯೋಜನೆ ಮೇಲೆ ಕರ್ತವ್ಯಕ್ಕೆ ನೇಮಿಸಿಕೊಳ್ಳಲು ಅವಕಾಶವಿದೆಯೇ; ಯಾವ ನಿಯಮಗಳಡಿ ಈ ರೀತಿ ನೇಮಕ ಮಾಡಿಕೊಳ್ಳಬಹುದು; (ಸಂಪೂರ್ಣ ವಿವರ ನೀಡುವುದು) | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994 ರ ಸೆಕ್ಷನ್ 34 ಮತ್ತು 35 ರಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br><br>ಅದರನ್ವಯ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಆಯಾ ವಿಭಾಗಗಳಲ್ಲಿನ ಅವಶ್ಯಕತೆಗನುಗುಣವಾಗಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಕುಲಪತಿಗಳ ಅನುಮೋದನೆಯ ಮೇರೆಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಿತ ಮಹಾವಿದ್ಯಾಲಯಗಳ (Affiliated Colleges) ಪ್ರಾಚಾರ್ಯರಿಂದ (Principal) ಒಪ್ಪಿಗೆ ಪಡೆದು ಬೋಧಕ & ಬೋಧಕೇತರ ಸಿಬ್ಬಂದಿಗಳನ್ನು ನಿಯೋಜನೆಯ ಮೇರೆಗೆ ನೇಮಿಸಿಕೊಳ್ಳಲಾಗುತ್ತಿದೆ. |
| ಆ) | ಈ ರೀತಿ ನಿಯೋಜನೆ ಮೇಲೆ ಎಷ್ಟು ಜನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಎಷ್ಟು ವರ್ಷದಿಂದ ನೇಮಕ ಮಾಡಿಕೊಳ್ಳಲಾಗಿದೆ; ಹಾಗೂ ಎಷ್ಟು ವರ್ಷಗಳವರೆಗೆ ನೇಮಕ ಮಾಡಿಕೊಳ್ಳಲು ಅವಕಾಶ ಇದೆ; (ವಿವರ ನೀಡುವುದು) | ಸನ್ 1998ರಿಂದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಿತ ಮಹಾವಿದ್ಯಾಲಯಗಳ (Affiliated Colleges) ಬೋಧಕ ಸಿಬ್ಬಂದಿಗಳನ್ನು ನಿಯೋಜನೆಯ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಹಾಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ 13 ಬೋಧಕ ಸಿಬ್ಬಂದಿಗಳು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಿತ ಮಹಾವಿದ್ಯಾಲಯಗಳಿಂದ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಮುಂದುವರಿದು, ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 50ರ ಪ್ರಕಾರ ನಿಯೋಜನೆ ಅವಧಿಯು 05 ವರ್ಷಗಳಾಗಿರುತ್ತದೆ. |

| | | |
|---|---|---|
| **ಇ)** | ಈ ರೀತಿ ಅವಧಿ ಮೀರಿ ಕರ್ತವ್ಯ ನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು; ಇವರುಗಳ ಮೇಲೆ ಕರ್ತವ್ಯ ಹೊರತುಪಡಿಸಿ ಅನ್ಯ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆಂದು ಎಷ್ಟು ದೂರುಗಳು ಬಂದಿವೆ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು; | ಹಾಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿದ್ಯಾಲಯದಲ್ಲಿ 03 ಬೋಧಕೇತರ ಸಿಬ್ಬಂದಿಗಳು 05 ವರ್ಷಗಳ ಅವಧಿ ಮೀರಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಸಿಬ್ಬಂದಿಗಳು ಅನ್ಯ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿರುವುದಿಲ್ಲ. ಹಾಗೂ ಈ ರೀತಿಯ ಯಾವುದೇ ದೂರುಗಳು ವಿಶ್ವವಿದ್ಯಾಲಯದಲ್ಲಿ ಸ್ವೀಕೃತವಾಗಿರುವುದಿಲ್ಲ. |
| **ಈ)** | ಈ ರೀತಿ ದೂರು ಬಂದ ಸಿಬ್ಬಂದಿಗಳನ್ನು ಈಗಲಾದರೂ ಕರ್ತವ್ಯದಿಂದ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು) | ಈ ರೀತಿಯ ಯಾವುದೇ ದೂರುಗಳು ವಿಶ್ವವಿದ್ಯಾಲಯದಲ್ಲಿ ಸ್ವೀಕೃತವಾಗಿರುವುದಿಲ್ಲ ವಾದ ಕಾರಣ ಕರ್ತವ್ಯದಿಂದ ಬಿಡುಗಡೆಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಇಡಿ 379 ಟಿಇಸಿ 2025**

(ಡಾ.ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು